**All India Radio: Bangalore**
**National Bulletin In Kannada**
**08.10.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ನವಿ ಮುಂಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ
2. ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದದಿಂದ ವಹಿವಾಟು ೨೫.೫ ಶತಕೋಟಿ ಪೌಂಡ್‌ಗಳಿಗೆ ಏರಿಕೆ ನಿರೀಕ್ಷೆ - ಬ್ರಿಟನ್ ಪ್ರಧಾನಿ
3. ಆಂಧ್ರಪ್ರದೇಶದ ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ ; ಕನಿಷ್ಠ ೬ ಮಂದಿ ಸಾವು
4. ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ; ಪಾಕಿಸ್ತಾನಕ್ಕೆ ೨೨೨ ರನ್‌ಗಳ ಗುರಿ ನೀಡಿದ ಆಸ್ಟ್ರೇಲಿಯಾ

<><><><>

೧೯ ಸಾವಿರದ ೬೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ನವಿ ಮುಂಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಈ ವಿಮಾನ ನಿಲ್ದಾಣವನ್ನು ವಾರ್ಷಿಕವಾಗಿ ೯೦ ದಶಲಕ್ಷ ಪ್ರಯಾಣಿಕರನ್ನು ಹಾಗೂ ಮೂರು ದಶಲಕ್ಷ ಮೆಟ್ರಿಕ್‌ಟನ್ ಸರಕು ನಿರ್ವಹಿಸುವ ಸಾಮರ್ಥ್ಯದೊಂದಿಗೆ ವಿನ್ಯಾಸಗೊಳಿಸಲಾಗಿದೆ. ಈ ವೇಳೆ ಮಾತನಾಡಿದ ಪ್ರಧಾನಿ ಮೋದಿ, ಹೊಸ ವಿಮಾನ ನಿಲ್ದಾಣವು ವಿಕಸಿತ ಭಾರತದ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ ಮತ್ತು ದೇಶದ ಪ್ರಗತಿ, ಸಂಸ್ಕೃತಿ ಮತ್ತು ತಾಂತ್ರಿಕ ಸಾಮರ್ಥ್ಯವನ್ನು ಸಂಕೇತಿಸುತ್ತದೆ ಎಂದು ಹೇಳಿದರು. ವಿಮಾನ ನಿಲ್ದಾಣದ ಕಮಲದ ಆಕಾರದ ವಿನ್ಯಾಸವು ಪ್ರಪಂಚದೊಂದಿಗೆ ವ್ಯಾಪಾರ ಮತ್ತು ಪ್ರವಾಸೋದ್ಯಮ ಸಂಪರ್ಕವನ್ನು ಬಲಪಡಿಸುವುದರ ಜೊತೆಗೆ ಭಾರತದ ಪರಂಪರೆಯನ್ನು ಪ್ರದರ್ಶಿಸುತ್ತದೆ ಎಂದರು. ಇದು ರೈತರು ಮತ್ತು ಮೀನುಗಾರರಿಗೆ ತಮ್ಮ ಉತ್ಪನ್ನಗಳನ್ನು ಜಾಗತಿಕ ಮಾರುಕಟ್ಟೆಗಳಿಗೆ ವೇಗವಾಗಿ ರಫ್ತು ಮಾಡಲು ಸಹಾಯ ಮಾಡುವ ಮೂಲಕ, ಹೂಡಿಕೆಯನ್ನು ಆಕರ್ಷಿಸುವ ಮತ್ತು ಉದ್ಯೋಗವನ್ನು ಸೃಷ್ಟಿಸುವ ಮೂಲಕ ಪ್ರಯೋಜನವನ್ನು ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಇದೇ ಸಂದರ್ಭದಲ್ಲಿ ಪ್ರಧಾನಿ, ಮುಂಬೈ ಮೆಟ್ರೋ ೩ನೇ ಮಾರ್ಗದ ೨ಬಿ ಹಂತವನ್ನು

ಉದ್ಘಾಟಿಸಿದರು. ೩೭ ಸಾವಿರದ ೨೭೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಮುಂಬೈ ಮೆಟ್ರೋ ೩ನೇ ಮಾರ್ಗವನ್ನು ರಾಷ್ಟ್ರಕ್ಕೆ ಸಮರ್ಪಿಸಿದರು.

<><><>

ಸಂಸತ್ ಭವನದಲ್ಲಿಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವಿರೇಂದ್ರ ಕುಮಾರ್ ಮತ್ತು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಬಿ.ಎಲ್. ವರ್ಮ ಭೇಟಿಯಾದರು. ಸಭೆಯಲ್ಲಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಕಾರ್ಯವೈಖರಿ ಮತ್ತು ಸಮಾಜದ ಹಿಂದುಳಿದ ಹಾಗೂ ಅಂಚಿನಲ್ಲಿರುವ ವರ್ಗಗಳ ಸಬಲೀಕರಣದಲ್ಲಿ ಸಚಿವಾಲಯದ ಪಾತ್ರದ ಕುರಿತು ಮಾಹಿತಿ ನೀಡಲಾಯಿತು. ಇದೇ ವೇಳೆ ಪ್ಯಾರಾಲಿಂಪಿಕ್ಸ್ ಮತ್ತು ವಿಶ್ವ ಪ್ಯಾರಾ ಅಥ್ಲಿಟಿಕ್ಸ್ ಚಾಂಪಿಯನ್ ಶಿಪ್‌ಗಳಲ್ಲಿ ದಿವ್ಯಾಂಗರ ಸಾಧನೆಯನ್ನು ಉಪರಾಷ್ಟ್ರಪತಿಯವರು ಶ್ಲಾಘಿಸಿದರು.

<><><>

ಐರೋಪ್ಯ ಒಕ್ಕೂಟದಿಂದ ಹೊರಬಂದ ನಂತರ ಬ್ರಿಟನ್ ಸಹಿ ಮಾಡಿದ ಅತಿದೊಡ್ಡ ಒಪ್ಪಂದ ಭಾರತ-ಬ್ರಿಟನ್ ಮುಕ್ತ ವ್ಯಾಪಾರ ಒಪ್ಪಂದವಾಗಿದೆ ಎಂದು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಹೇಳಿದ್ದಾರೆ. ಭಾರತ ಭೇಟಿಯಲ್ಲಿರುವ ಬ್ರಿಟನ್ ಪ್ರಧಾನಿ ಮುಂಬೈನಲ್ಲಿಂದು ಉದ್ಯಮ ನಾಯಕರನ್ನು ಉದ್ದೇಶಿಸಿ ಮಾತನಾಡಿ, ಭಾರತ ಮತ್ತು ಬ್ರಿಟನ್ ನಡುವಿನ ವ್ಯಾಪಾರ ಪಾಲುದಾರಿಕೆಯು ಹೆಚ್ಚಿನ ಮಹತ್ವದ್ದಾಗಿದೆ. ಈ ವರ್ಷದ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಬ್ರಿಟನ್ ಭೇಟಿಯ ನಂತರ ಉಭಯ ದೇಶಗಳ ನಡುವಿನ ಬಾಂಧವ್ಯ ಮತ್ತಷ್ಟು ಬಲವಾಗಿದೆ ಎಂದರು. ಕಳೆದ ವರ್ಷ ಜುಲೈನಲ್ಲಿ ಪ್ರಧಾನಿ ಮೋದಿ ಅವರ ಲಂಡನ್ ಭೇಟಿಯ ಸಮಯದಲ್ಲಿ ಸಹಿ ಹಾಕಲಾದ ಮುಕ್ತ ವ್ಯಾಪಾರ ಒಪ್ಪಂದವು ಉಭಯ ದೇಶಗಳ ನಡುವಿನ ವ್ಯಾಪಾರವನ್ನು ವಾರ್ಷಿಕವಾಗಿ ೨೫.೫ ಶತಕೋಟಿ ಪೌಂಡ್‌ಗಳಷ್ಟು ಹೆಚ್ಚಿಸುವ ನಿರೀಕ್ಷೆಯಿದೆ. ಈ ಒಪ್ಪಂದವು ಜವಳಿ, ಮದ್ಯ ಮತ್ತು ಕಾರುಗಳಂತಹ ಉತ್ಪನ್ನಗಳಂತಹ ಮೇಲಿನ ಪ್ರಮುಖ ಸುಂಕ ಕಡಿತವನ್ನು ಒಳಗೊಂಡಿದೆ ಎಂದು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ತಿಳಿಸಿದರು.

<><><>

ಆಂಧ್ರಪ್ರದೇಶದ ಡಾ. ಬಿ.ಆರ್. ಅಂಬೇಡ್ಕರ್ ಕೊನಸೀಮಾ ಜಿಲ್ಲೆಯ ರಾಯವರಂ ಮಂಡಲದಲ್ಲಿರುವ ಪಟಾಕಿ ತಯಾರಿಕಾ ಘಟಕದಲ್ಲಿ ಇಂದು ಸಂಭವಿಸಿದ ಸ್ಫೋಟದಲ್ಲಿ ಕನಿಷ್ಠ ೭ ಕಾರ್ಮಿಕರು ಸಾವನ್ನಪ್ಪಿದ್ದು, ಇಬ್ಬರು ಗಾಯಗೊಂಡಿದ್ದಾರೆ. ಪಟಾಕಿ ತಯಾರಿಕಾ ಘಟಕದಲ್ಲಿ ಕಾರ್ಮಿಕರು ಪಟಾಕಿ ತಯಾರಿಕೆಯಲ್ಲಿ ತೊಡಗಿದ್ದಾಗ ಈ ಘಟನೆ ಸಂಭವಿಸಿದೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಕಾಕಿನಾಡದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಘಟನೆ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ, ಆಂಧ್ರಪ್ರದೇಶ ಮುಖ್ಯಮಂತ್ರಿ

ನಾರಾ ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದು, ಮೃತ ಕಾರ್ಮಿಕರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಗಾಯಗೊಂಡವರಿಗೆ ಸೂಕ್ತ ವೈದ್ಯಕೀಯ ನೆರವು ನೀಡುವಂತೆ ಜಿಲ್ಲಾಡಳಿತಕ್ಕೆ ಆದೇಶಿಸಿದ್ದಾರೆ.

<><><><>

ಅಮೆರಿಕ, ಜಪಾನ್ ಮತ್ತು ಆಸ್ಟ್ರೇಲಿಯಾದ ಮೂವರು ವಿಜ್ಞಾನಿಗಳಿಗೆ ಇಂದು ೨೦೨೫ರ ರಸಾಯನ ಶಾಸ್ತ್ರದ ನೊಬೆಲ್ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ನೊಬೆಲ್ ಪುರಸ್ಕೃತ ವಿಜ್ಞಾನಿಗಳಾದ ಸುಸುಮು ಕಿಟಗಾವಾ, ರಿಚರ್ಡ್ ರಾಬ್ಸನ್ ಮತ್ತು ಒಮರ್ ಎಂ. ಯಾಗಿ ಅವರು, ರಸಾಯನ ಶಾಸ್ತ್ರದಲ್ಲಿ ಮಾಡಲಾದ ಸಾಧನೆಗಾಗಿ ಈ ಪ್ರಶಸ್ತಿಗೆ ಭಾಜನರಾಗಿದ್ದಾರೆ.

<><><><>

ಹರಿಯಾಣದ ಸೋನಿಪತ್‌ನಲ್ಲಿ ಭಾರತದ ಮೊದಲ ವಾಣಿಜ್ಯ ಎಲೆಕ್ಟ್ರಿಕ್ ಟ್ರಕ್ ಬ್ಯಾಟರಿ ವಿನಿಮಯ ಮತ್ತು ಚಾರ್ಜಿಂಗ್ ಕೇಂದ್ರವನ್ನು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಉದ್ಘಾಟಿಸಿದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತ ವಿಮಾನ ಇಂಧನ ಉತ್ಪಾದಿಸುವಲ್ಲಿ ಪ್ರಥಮ ಸ್ಥಾನ ಪಡೆಯುವ ದಿನ ದೂರವಿಲ್ಲ. ರೈತರು ಕೂಳೆಯನ್ನು ಸುಡುವ ಬದಲು ಇಂಧನ ಉತ್ಪಾದಿಸಲು ಬಳಸಬಹುದಾದ ರೀತಿಯಲ್ಲಿ ಅದನ್ನು ಬಳಸಬೇಕು. ಇದರಿಂದಾಗಿ ರೈತರ ಆರ್ಥಿಕ ಸ್ಥಿತಿ ಬಲಗೊಳ್ಳುತ್ತದೆ. ಅಲ್ಲದೇ ರೈತರು ಇಂಧನ ಪೂರೈಕೆದಾರರಾಗುತ್ತಾರೆ ಎಂದು ಹೇಳಿದರು. ಜೋಳದಿಂದ ಎಥನಾಲ್ ಉತ್ಪಾದಿಸಲಾಗುತ್ತಿದೆ. ಇದು ಜೋಳದ ಮಾರುಕಟ್ಟೆಯನ್ನು ವಿಸ್ತರಿಸಿದೆ. ಕಂಪನಿಗಳು ಫ್ಲೆಕ್ಸ್ ಎಂಜಿನ್‌ಗಳನ್ನು ಅಭಿವೃದ್ಧಿಪಡಿಸುವಲ್ಲಿ ನಿರತವಾಗಿವೆ. ಕೃಷಿ ಯಂತ್ರೋಪಕರಣಗಳು ಈಗ ಫ್ಲೆಕ್ಸ್ ಎಂಜಿನ್‌ಗಳನ್ನು ಹೊಂದಲಿವೆ. ಈ ಎಲ್ಲ ಪ್ರಯತ್ನಗಳಿಂದ ಕೃಷಿ ತ್ಯಾಜ್ಯ ಸುಡುವುದರಿಂದ ಉಂಟಾಗುವ ಮಾಲಿನ್ಯವನ್ನು ತಡೆಯುವಲ್ಲಿ ಯಶಸ್ವಿಯಾಗಲಿದ್ದೇವೆ ಎಂದು ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ.

**ಧ್ವನಿ: ನಿತಿನ್ ಗಡ್ಕರಿ (೩೫ ಸೆಕೆಂಡ್ಸ್)**

<><><><>

ಕೃತಕ ಬುದ್ಧಿಮತ್ತೆಯು ಕೇವಲ ಎಂಜಿನಿಯರ್‌ಗಳಿಗೆ ಸೀಮಿತವಾಗಿಲ್ಲ. ಉತ್ಪಾದಕತೆಯನ್ನು ಹೆಚ್ಚಿಸಲು ಮತ್ತು ಜೀವನೋಪಾಯವನ್ನು ತಂತ್ರಜ್ಞಾನವನ್ನು ಬಯಸುವ ಯಾರಿಗಾದರೂ ಇದು ಒಂದು ಸಾಧನವಾಗಿದೆ ಎಂದು ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ೬ನೇ ತರಗತಿಯಿಂದ ಎಐ ಸಿದ್ಧತಾ ಕೋರ್ಸ್‌ಗಳನ್ನು ಈಗಾಗಲೇ ಪರಿಚಯಿಸಲಾಗಿದ್ದು, ಉಚಿತ ಆನ್‌ಲೈನ್ ಸಾಮಾಗ್ರಿಗಳು ಲಭ್ಯವಿದೆ ಎಂದರು. ಇದೇ ವೇಳೆ ಮಾತನಾಡಿದ ನೀತಿ ಆಯೋಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ.ಆರ್. ಸುಬ್ರಮಣ್ಯಂ,

ಭಾರತ ತಾಂತ್ರಿಕ ಬದಲಾವಣೆಗಳನ್ನು ಮೊದಲೇ ಗುರುತಿಸಬೇಕು. ಕೃತಕಬುದ್ಧಿಮತ್ತೆ, ಜೈವಿಕ ತಂತ್ರಜ್ಞಾನ ಮತ್ತು ಕ್ವಾಂಟಮ್ ತಂತ್ರಜ್ಞಾನಗಳಂತಹ ಉದಯೋನ್ಮುಖ ಕ್ಷೇತ್ರಗಳಲ್ಲಿ ಮಾನದಂಡಗಳನ್ನು ನಿಗದಿಪಡಿಸುವಲ್ಲಿ ಜಗತ್ತನ್ನು ಮುನ್ನಡೆಸಬೇಕು ಎಂದು ಪ್ರತಿಪಾದಿಸಿದರು.

<><><>

ಕೇಂದ್ರ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ಬರೆದ ಲೇಖನವನ್ನು ಪ್ರಧಾನಿ ನರೇಂದ್ರ ಮೋದಿ ಹಂಚಿಕೊಂಡಿದ್ದಾರೆ. ಈ ಲೇಖನ ಕಳೆದ ದಶಕದಲ್ಲಿ ವನ್ಯಜೀವಿ ಸಂರಕ್ಷಣೆಯಲ್ಲಿ ದೇಶದ ಗಮನಾರ್ಹ ಪ್ರಗತಿಯನ್ನು ತೋರುತ್ತದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ, ಪರಿಸರ ಸುಸ್ಥಿರತೆಗೆ ದೇಶದ ಬಲವಾದ ಬದ್ಧತೆಯನ್ನು ಪ್ರತಿಬಿಂಬಿಸುವ ಪ್ರಭೇದಗಳನ್ನು ಸಂರಕ್ಷಿಸುವ ಮತ್ತು ಅವನತಿ ಹೊಂದಿದ ಆವಾಸ ಸ್ಥಾನಗಳನ್ನು ಪುನರ್ ಸ್ಥಾಪಿಸುವ ಗುರಿಯನ್ನು ಲೇಖನ ಒತ್ತಿ ಹೇಳುತ್ತದೆ ಎಂದು ತಿಳಿಸಿದ್ದಾರೆ.

<><><>

ನಗರೀಕರಣವು ಇಂದು ಒಟ್ಟು ಜಿಡಿಪಿಯ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಗೆ ಪ್ರಮುಖ ಅಂಶವಾಗಿದೆ ಎಂದು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಖಾತೆ ರಾಜ್ಯ ಸಚಿವ ತೋಖನ್ ಸಾಹು ಹೇಳಿದ್ದಾರೆ. ನವದೆಹಲಿಯಲ್ಲಿಂದು ವಿಶ್ವ ಆವಾಸಸ್ಥಾನ ದಿನಾಚರಣೆ ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತ ಕಳೆದ ೨೦೦ ವರ್ಷಗಳಿಗಿಂತ ಮುಂದಿನ ೪೦ ರಿಂದ ೫೦ ವರ್ಷಗಳಲ್ಲಿ ಹೆಚ್ಚಿನ ನಗರೀಕರಣವನ್ನು ಕಾಣಲಿದೆ. ಭಾರತದ ಅಭಿವೃದ್ಧಿಯ ಪ್ರಯಾಣದ ಯಶಸ್ಸು ನಾವು ಸುಸ್ಥಿರ ನಗರೀಕರಣವನ್ನು ಹೇಗೆ ಮುನ್ನಡೆಸುತ್ತೇವೆ ಎಂಬುದರ ಬಗ್ಗೆ ಅವಲಂಬಿತವಾಗಿರುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

<><><>

ಪಾಕಿಸ್ತಾನದ ಖೈಬರ್ ಪಖ್ತುನ್ವಾ ಪ್ರಾಂತ್ಯದಲ್ಲಿ ಇಂದು ಉಗ್ರ ಸಂಘಟನೆ ನಡೆಸಿದ ದಾಳಿಯಲ್ಲಿ ಪಾಕಿಸ್ತಾನ ಸೇನೆಯ ಕನಿಷ್ಠ ೯ ಸೈನಿಕರು ಮತ್ತು ಇಬ್ಬರು ಅಧಿಕಾರಿಗಳು ಮೃತಪಟ್ಟಿದ್ದಾರೆ.

<><><>

ಕೊಲೊಂಬೋದ ಆರ್. ಪ್ರೇಮದಾಸ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಮಹಿಳೆಯರ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ಪಾಕಿಸ್ತಾನ ವನಿತಾ ತಂಡಗಳು ಮುಖಾಮುಖಿಯಾಗಿವೆ.  ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೨೧ ರನ್ ಮಾಡಿದೆ. ಈ ಗುರಿಯನ್ನು ಬೆನ್ನತ್ತಿರುವ ಪಾಕಿಸ್ತಾನ ಇತ್ತೀಚಿನ ವರದಿ ಬಂದಾಗ ೮ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೩೦ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>